# ಯೂದನು ಬರೆದ ಪತ್ರ

ಯೇಸು ಕ್ರಿಸ್ತನ ಸೇವಕನೂ ಯಾಕೋಬನ ಸಹೋದರನೂ
ಆಗಿರುವ ಯೂದನು ದೇವರಿಂದ ಕರೆಯಲ್ಪಟ್ಟ ಜನರೆಲ್ಲರಿಗೂ
ಬರೆಯುವ ಪತ್ರ. ತಂದೆಯಾದ ದೇವರು ನಿಮ್ಮನ್ನು ಪ್ರೀತಿಸು
ತ್ತಾನೆ. ಮತ್ತು ನಿಮ್ಮನ್ನು ಯೇಸು ಕ್ರಿಸ್ತನಿಗಾಗಿ ಸುರಕ್ಷಿತ
ವಾಗಿಟ್ಟಿದ್ದಾನೆ.
2 ನಿಮಗೆ ಕರುಣೆ, ಶಾಂತಿ ಮತ್ತು ಪ್ರೀತಿ ಹೆಚ್ಚಾಗಲಿ.

### ತಪ್ಪು ಮಾಡಿದ ಜನರನ್ನು ದೇವರು ದಂಡಿಸುತ್ತಾನೆ

3 ಪ್ರಿಯ ಸ್ನೇಹಿತರೇ, ನಾವೆಲ್ಲರೂ ಹಂಚಿಕೊಳ್ಳುವ ರಕ್ಷಣೆ
ಯನ್ನು ಕುರಿತು ನಿಮಗೆ ಬರೆಯಬೇಕೆಂದು ನಾನು ಬಹಳವಾಗಿ
ಇಚ್ಛಿಸಿದ್ದೆನು. ಆದರೆ ಮತ್ತೊಂದು ವಿಷಯದ ಬಗ್ಗೆ ನಾನು ನಿಮಗೆ
ಬರೆಯುವುದು ಅಗತ್ಯವೆನಿಸಿತು. ದೇವರು ತನ್ನ ಪರಿಶುದ್ಧ
ಜನರಿಗೆ ದಯಪಾಲಿಸಿರುವ ನಂಬಿಕೆಗಾಗಿ ನೀವು ಪ್ರಯಾಸ
ಪಟ್ಟು ಹೋರಾಡುವಂತೆ ನಾನು ನಿಮ್ಮನ್ನು ಪ್ರೋತ್ಸಾಹಿಸಲು
ಇಚ್ಛಿಸುತ್ತೇನೆ. ದೇವರು ನಮಗೆ ಈ ನಂಬಿಕೆಯನ್ನು ಒಂದೇ ಸಲ
ದಯಪಾಲಿಸಿದನು. ಅದು ಸರ್ವಕಾಲಗಳಲ್ಲಿಯೂ ಒಳ್ಳೆಯ
ದಾಗಿದೆ. 4 ಕೆಲವು ಜನರು ರಹಸ್ಯವಾಗಿ ನಿಮ್ಮ ಸಭೆಯಲ್ಲಿ
ಪ್ರವೇಶಿಸಿದ್ದಾರೆ. ಇವರಿಗಾಗುವ ದಂಡನೆಯ ಕುರಿತು ಬಹು
ಕಾಲದ ಹಿಂದೆಯೇ ಪ್ರವಾದಿಗಳು ಬರೆದಿದ್ದಾರೆ. ಈ ಜನರು
ದೇವರಿಗೆ ವಿರುದ್ಧವಾಗಿದ್ದಾರೆ. ಅವರು ಪಾಪಕಾರ್ಯಗಳನ್ನು
ಮಾಡುವುದಕ್ಕಾಗಿ ನಮ್ಮ ದೇವರ ಕೃಪೆಯನ್ನು ಉಪಯೋಗಿಸಿ
ಕೊಂಡು ನಮ್ಮ ಒಬ್ಬನೇ ಒಡೆಯನಾದ ಮತ್ತು ಪ್ರಭುವಾದ
ಯೇಸು ಕ್ರಿಸ್ತನನ್ನು ಸ್ವೀಕರಿಸಿಕೊಳ್ಳುವುದಿಲ್ಲ.
5 ನೀವು ಈಗಾಗಲೇ ತಿಳಿದುಕೊಂಡಿರುವ ಕೆಲವು ವಿಚಾರ
ಗಳನ್ನು ನೆನಪುಮಾಡಿಕೊಳ್ಳಲು ನಾನು ನಿಮಗೆ ಸಹಾಯ ಮಾಡ
ಲಿಚ್ಛಿಸುತ್ತೇನೆ. ಪ್ರಭು ತನ್ನ ಜನರನ್ನು ಈಜಿಪ್ಟ್ ದೇಶದಿಂದ
ಹೊರಗೆ ತಂದು ಅವರನ್ನು ರಕ್ಷಿಸಿದನೆಂಬುದನ್ನು ನೆನಪು ಮಾಡಿ
ಕೊಳ್ಳಿರಿ. ತರುವಾಯ ಪ್ರಭುವು ನಂಬಿಕೆಯಿಲ್ಲದ ಜನರೆಲ್ಲ
ರನ್ನೂ ನಾಶಪಡಿಸಿದನು. 6 ದೇವದೂತರು ಅಧಿಕಾರವನ್ನು
ಹೊಂದಿದ್ದರೂ ಅದನ್ನು ಉಳಿಸಿಕೊಳ್ಳಲಾರದೆ ಸ್ವಂತ ವಾಸಸ್ಥಾನ
ವನ್ನು ಬಿಟ್ಟುಹೋದದ್ದನ್ನು ನೆನಸಿಕೊಳ್ಳಿರಿ. ಆದ್ದರಿಂದ ಪ್ರಭುವು
ಈ ದೇವದೂತರನ್ನು ಅಂಧಕಾರದಲ್ಲಿಟ್ಟನು. ಅವರನ್ನು ಶಾಶ್ವತ
ವಾದ ಬೇಡಿಗಳಿಂದ ಬಂಧಿಸಲಾಯಿತು. ಮಹಾದಿನದಂದು
ಅವರಿಗೆ ತೀರ್ಪು ನೀಡುವುದಕ್ಕಾಗಿ ಆತನು ಅವರನ್ನು ಅಲ್ಲಿ
ಟ್ಟಿದ್ದಾನೆ. 7 ಸೊದೋಮ್ ಮತ್ತು ಗೊಮೋರ ನಗರಗಳನ್ನೂ
ಅವುಗಳ ಸುತ್ತಲಿನ ಪಟ್ಟಣಗಳನ್ನೂ ನೆನಪು ಮಾಡಿಕೊಳ್ಳಿರಿ.
ಅವುಗಳೂ ಆ ದೇವದೂತರಂತಾದವು. ಆ ಪಟ್ಟಣಗಳಲ್ಲಿ ಲೈಂಗಿಕ
ಪಾಪಗಳು ಮತ್ತು ಕೆಟ್ಟಕಾರ್ಯಗಳು ತುಂಬಿಕೊಂಡಿದ್ದವು.
ಅವರು ನಿತ್ಯವಾದ ಬೆಂಕಿಯ ದಂಡನೆಯಿಂದ ಸಂಕಟಪಡು
ವರು. ಅವರಿಗೆ ನೀಡಿದ ದಂಡನೆಯು ನಮಗೊಂದು ದೃಷ್ಟಾಂತ
ವಾಗಿದೆ.
8 ನಿಮ್ಮ ಸಭೆಯಲ್ಲಿ ಪ್ರವೇಶಿಸಿರುವ ಜನರಿಗೂ ಇದೇ
ರೀತಿಯಾಗುವುದು. ಅವರ ಕನಸುಗಳೇ ಅವರಿಗೆ ಮಾರ್ಗದರ್ಶಿ
ಯಾಗಿವೆ. ಅವರು ಪಾಪಗಳಿಂದಲೇ ತಮ್ಮನ್ನು ಮಲಿನ ಮಾಡಿ
ಕೊಳ್ಳುತ್ತಾರೆ. ಅವರು ಪ್ರಭುವಿನ ಅಧಿಕಾರವನ್ನು ತಿರಸ್ಕರಿಸು
ತ್ತಾರೆ; ಪ್ರಭಾವದಿಂದ ಕೂಡಿದ ದೇವದೂತರ ವಿರುದ್ಧ
ಕೆಟ್ಟದ್ದನ್ನು ಹೇಳುತ್ತಾರೆ. 9 ಪ್ರಧಾನ ದೇವದೂತನಾದ ಮಿಕಾ
ಯೇಲನೂ ಸಹ ಹೀಗೆ ಮಾಡಲಿಲ್ಲ. ಮೋಶೆಯ ದೇಹವು
ಯಾರಿಗೆ ಸೇರಬೇಕೆಂಬುದರ ಬಗ್ಗೆ ಮಿಕಾಯೇಲನು ಸೈತಾನನ
ಬಗ್ಗೆ ದೂಷಣೆ ಮಾಡಲು ಧೈರ್ಯಗೊಳ್ಳದೆ, ‘‘ಪ್ರಭುವು ನಿನ್ನನ್ನು
ದಂಡಿಸುತ್ತಾನೆ’’ ಎಂದು ಹೇಳಿದನು. 10 ಆದರೆ ಈ ಜನರು
ತಮಗೆ ಅರ್ಥವಾಗದ್ದನ್ನೂ ಟೀಕಿಸುತ್ತಾರೆ. ಅವರಿಗೂ ಸ್ವಲ್ಪ
ಅರ್ಥವಾಗುತ್ತದೆ. ಆದರೆ ಅವರು ವಿವೇಕಶೂನ್ಯ ಪ್ರಾಣಿಗಳಂತೆ
ಸಹಜ ಪ್ರವೃತ್ತಿಯಿಂದ ಅವುಗಳನ್ನು ಅರ್ಥಮಾಡಿಕೊಳ್ಳು
ತ್ತಾರೆಯೇ ಹೊರತು ವಿವೇಚನೆಯಿಂದ ಅರ್ಥಮಾಡಿಕೊಳ್ಳು
ವುದಿಲ್ಲ. ಇವುಗಳೇ ಅವರನ್ನು ನಾಶ ಮಾಡುತ್ತವೆ.
11 ಅವರಿಗೆ ದುರ್ಗತಿಯಾಗುವುದು. ಈ ಜನರು ಕಾಯಿನನ
ಮಾರ್ಗವನ್ನು ಅನುಸರಿಸುತ್ತಾರೆ. ಇವರು ದ್ರವ್ಯಸಂಪಾದನೆ
ಗಾಗಿ, ಬಿಳಾಮನ ತಪ್ಪುಮಾರ್ಗದಲ್ಲಿ ನಡೆಯಲು ತಮ್ಮನ್ನೇ
ಒಪ್ಪಿಸಿಕೊಟ್ಟಿದ್ದಾರೆ. ಕೋರಹನು ಮಾಡಿದಂತೆ ಈ ಜನರೂ
ದೇವರ ವಿರುದ್ಧವಾಗಿ ಹೋರಾಡುತ್ತಿದ್ದಾರೆ. ಅವರು ಕೋರಹ
ನಂತೆ ನಾಶವಾಗುತ್ತಾರೆ. 12 ನಿಮ್ಮ ಅನ್ಯೋನ್ಯತೆಯ ಭೋಜನ
ದಲ್ಲಿ ಈ ಜನರು ಮುಳುಗಿಹೋದ ಬಂಡೆಗಳಂತಿದ್ದಾರೆ. ಅವರು
ಭಯವಿಲ್ಲದೆ ನಿಮ್ಮ ಜೊತೆಯಲ್ಲಿ ತಿನ್ನುತ್ತಾರೆ. ಅವರು ತಮ್ಮ
ಬಗ್ಗೆ ಮಾತ್ರ ಚಿಂತಿಸುವ ಕುರುಬರಾಗಿದ್ದಾರೆ. ಅವರು ನೀರಿಲ್ಲದ
ಮೋಡಗಳಂತಿದ್ದಾರೆ. ಗಾಳಿಯು ಆ ಮೋಡಗಳನ್ನು ಬಡಿದು
ಕೊಂಡು ಹೋಗುವುದು. ಅವರು ಕಾಲಕ್ಕೆ ತಕ್ಕಂತೆ ಫಲಬಿಡದೆ
ಮತ್ತು ಬೇರುಸಹಿತ ಕಿತ್ತುಬಂದು ಉರುಳಿಹೋದ ಮರಗಳಂತಿ
ದ್ದಾರೆ.
13 ಇವರು ಸಮುದ್ರದಲ್ಲಿನ ಭೀಕರವಾದ ಅಲೆಗಳಂತಿದ್ದಾರೆ.
ಈ ಅಲೆಗಳು ನೊರೆಯನ್ನು ಕಾರುವಂತೆ ಇವರು ನಾಚಿಕೆ
ಯಿಲ್ಲದ ಕೆಲಸಗಳನ್ನು ಮಾಡುತ್ತಾರೆ. ಈ ಜನರು ಆಕಾಶದಲ್ಲಿ
ಅಲೆಯುವ ನಕ್ಷತ್ರಗಳಂತಿದ್ದಾರೆ. ಇವರಿಗಾಗಿ ಶಾಶ್ವತವಾದ
ಕಾರ್ಗತ್ತಲಿನ ಸ್ಥಳವನ್ನು ಕಾದಿರಿಸಲಾಗಿದೆ.
14 ಆದಾಮನ ಏಳನೆಯ ತಲೆಮಾರಿನವನಾದ ಹನೋಕನು
ಈ ಜನರನ್ನು ಕುರಿತು ಹೀಗೆ ಹೇಳಿದ್ದಾನೆ: ‘‘ಇಗೋ, ಪ್ರಭುವು

ತನ್ನ ಲಕ್ಷಾಂತರ ಪರಿಶುದ್ಧ ದೂತರೊಂದಿಗೆ ಬರುತ್ತಿದ್ದಾನೆ.
15ಪ್ರಭುವು ಪ್ರತಿಯೊಬ್ಬರಿಗೂ ನ್ಯಾಯತೀರಿಸುತ್ತಾನೆ. ಭಕ್ತಿ
ಹೀನರು ತನಗೆ ವಿರುದ್ಧವಾಗಿ ಮಾಡಿದ ಎಲ್ಲಾ ದುಷ್ಕೃತ್ಯಗಳನ್ನು
ಮತ್ತು ಪಾಪಿಷ್ಠರು ತನಗೆ ವಿರುದ್ಧವಾಗಿ ಆಡಿದ ಎಲ್ಲಾ
ದೂಷಣೆಗಳನ್ನು ಖಂಡಿಸಲು ಆತನು ಬರುತ್ತಾನೆ.''

16ಈ ದುರ್ಬೋಧಕರಾದರೊ ಗುಣಗುಟ್ಟುವವರು, ತಪ್ಪು
ಹುಡುಕುವವರು, ದುರಾಶೆಗಳಿಗೆ ಬಲಿಯಾದವರು, ಬಡಾಯಿ
ಕೊಚ್ಚುವವರು, ಸ್ವಪ್ರಯೋಜನಕ್ಕಾಗಿ ಮುಖಸ್ತುತಿ ಮಾಡು
ವವರು.

### ಎಚ್ಚರಿಕೆ ಮತ್ತು ಮಾಡಬೇಕಾದ ಕಾರ್ಯಗಳು

ಪ್ರಿಯ ಸ್ನೇಹಿತರೇ, ನಮ್ಮ ಪ್ರಭುವಾದ ಯೇಸು ಕ್ರಿಸ್ತನ
ಅಪೊಸ್ತಲರು ಮುಂಚೆ ಏನು ಹೇಳಿದರೆಂಬುದನ್ನು ನೆನಪು
ಮಾಡಿಕೊಳ್ಳಿ. 18ಅಪೊಸ್ತಲರು ನಿಮಗೆ, ''ಅಂತ್ಯಕಾಲದಲ್ಲಿ
ದೇವರನ್ನು ಕುರಿತು ನಗುವ ಜನರಿರುತ್ತಾರೆ'' ಎಂದು ಹೇಳಿ
ದರು. ಈ ಜನರು ತಮ್ಮ ಇಚ್ಛೆಗನುಸಾರವಾದ ಮತ್ತು ದೇವರಿಗೆ
ವಿರುದ್ಧವಾದವುಗಳನ್ನು ಮಾತ್ರ ಮಾಡುತ್ತಿದ್ದರು. 19ಈ ಜನರು
ನಿಮ್ಮಲ್ಲಿ ಭೇದವನ್ನು ಹುಟ್ಟಿಸುತ್ತಾರೆ. ಈ ಜನರು ತಮ್ಮ ಪಾಪ
ಸ್ವಭಾವದ ಅಪೇಕ್ಷೆಯಂತೆ ಮಾತ್ರ ಮಾಡುತ್ತಾರೆ. ಅವರಲ್ಲಿ
ಪವಿತ್ರಾತ್ಮನಿಲ್ಲ.

20ಆದರೆ ಪ್ರಿಯ ಸ್ನೇಹಿತರೇ, ನೀವು ನಿಮ್ಮ ಅತಿ ಪರಿಶುದ್ಧ
ನಂಬಿಕೆಯ ಮೂಲಕ ದೃಢವಾಗಿರಿ. ಪವಿತ್ರಾತ್ಮಭರಿತರಾಗಿ
ಪ್ರಾರ್ಥಿಸಿರಿ. 21ದೇವರ ಪ್ರೀತಿಯಲ್ಲಿ ನೆಲೆಗೊಂಡಿರಿ. ನಿತ್ಯ
ಜೀವವನ್ನು ಹೊಂದಿಕೊಳ್ಳುವುದಕ್ಕಾಗಿ ಪ್ರಭುವಾದ ಯೇಸು
ಕ್ರಿಸ್ತನ ಕರುಣೆಯನ್ನೇ ಎದುರು ನೋಡುತ್ತಿರಿ.

22ಸಂದೇಹವಿರುವ ಜನರಿಗೆ ಕರುಣೆ ತೋರಿ. 23ಇತರ
ಜನರನ್ನು ರಕ್ಷಿಸಿ. ಆ ಜನರನ್ನು ಬೆಂಕಿಯಿಂದ ಹೊರಕ್ಕೆ ತನ್ನಿರಿ.
ನೀವು ಕೆಲವು ಜನರಿಗೆ ಕರುಣೆತೋರುವಾಗ ಎಚ್ಚರದಿಂದಿರಿ.
ಅವರ ಪಾಪಗಳಿಂದ ಹೊಲಸಾಗಿರುವವರ ಬಟ್ಟೆಗಳನ್ನು ಸಹ
ದ್ವೇಷಿಸಿರಿ.

### ದೇವರಿಗೆ ಸ್ತೋತ್ರ ಮಾಡಿರಿ

24ಆತನು (ದೇವರು) ಬಲಶಾಲಿಯಾಗಿದ್ದಾನೆ. ನೀವು
ಬೀಳದಂತೆ ಆತನು ನಿಮಗೆ ಸಹಾಯ ಮಾಡಬಲ್ಲನು. ಆತನು
ನಿಮ್ಮಲ್ಲಿ ಯಾವ ತಪ್ಪೂ ಇಲ್ಲದಂತೆ ಮಾಡಿ, ತನ್ನ ಮಹಿಮಾ
ಸನ್ನಿಧಿಗೆ ತರುವುದಕ್ಕೂ ನಿಮಗೆ ಮಹಾಸಂತೋಷವನ್ನು
ಕೊಡುವುದಕ್ಕೂ ಶಕ್ತನಾಗಿದ್ದಾನೆ. 25ಆತನೊಬ್ಬನೇ ದೇವರು.
ನಮ್ಮನ್ನು ರಕ್ಷಿಸುವಾತನು ಆತನೊಬ್ಬನೇ. ಆದಿಯಿಂದ
ಇದ್ದಹಾಗೆ ಈಗಲೂ ಯಾವಾಗಲೂ ನಮ್ಮ ಪ್ರಭುವಾದ ಯೇಸು
ಕ್ರಿಸ್ತನ ಮೂಲಕ ಆತನಿಗೆ ಪ್ರಭಾವ, ಮಹತ್ವ, ಅಧಿಪತ್ಯ ಮತ್ತು
ಅಧಿಕಾರಗಳು ಇರಲಿ. ಆಮೆನ್.

